# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆರಡನೆಯ ಅಧಿವೇಶನ

**ಕಾರ್ಯಕಲಾಪಗಳ ಪಟ್ಟಿ**

**ಬುಧವಾರ, ದಿನಾಂಕ: 23ನೇ ನವೆಂಬರ್, 2016**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

### 01. ಸಂತಾಪ ಸೂಚನೆ

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) ಅವರು:-**

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2016ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2015-16ನೇ ಸಾಲಿನ ಧನ ವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಭಾಗ-1 ಮತ್ತು ಭಾಗ-2) ಸಭೆಯ ಮುಂದಿಡುವುದು.

### 04. ವರದಿಯನ್ನೊಪ್ಪಿಸುವುದು

**ಶ್ರೀ ಆರ್. ಧರ್ಮಸೇನ (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ 2016-17ನೇ ಸಾಲಿನ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಆರನೇ ವರದಿಯನ್ನು ಒಪ್ಪಿಸುವುದು.

### 05. ರಾಜ್ಯದಲ್ಲಿ ತಲೆದೋರಿರುವ ಬರಗಾಲದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ

## ೦೬. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀಮತಿ ಮೋಟಮ್ಮ** ಅವರು ರಾಜ್ಯದಲ್ಲಿ ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಇಲಾಖೆಯ ವಸತಿ ನಿಲಯಗಳಲ್ಲಿ 'ಡಿ' ಗ್ರೂಪ್ ಹುದ್ದೆಗಳಿಗೆ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಸರ್ಕಾರವು ಮುಂದಾಗಿರುವುದರಿಂದ, ಹಲವಾರು ವರ್ಷಗಳಿಂದ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಬೀದಿ ಪಾಲಾಗುವ ಕುರಿತು **ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಪುಟ್ಟಣ್ಣ** ಅವರು ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಶೇಕಡ ೫೫ಕ್ಕಿಂತ ಕಡಿಮೆ ಅಂಕಪಡೆದು ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರನ್ನು ಖಾಯಂಗೊಳಿಸುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರ** ಗಮನ ಸೆಳೆಯುವುದು.

## ೦೭. ನಿಯಮ ೩೩೦ರ ಮೇರೆಗೆ

**ಶ್ರೀಯುತರುಗಳಾದ: ಅರುಣ ಶಹಾಪುರ, ಬಸವರಾಜ ಹೊರಟ್ಟಿ ಹಾಗೂ ಪುಟ್ಟಣ್ಣ** ಅವರುಗಳು ಅನುದಾನಿತ ಐ.ಟಿ.ಐ. ಶಿಕ್ಷಣ ಸಂಸ್ಥೆಗಳು ಬೋಧನಾ ಶುಲ್ಕವನ್ನು ಸರ್ಕಾರಕ್ಕೆ ಜಮೆ ಮಾಡದ ಕಾರಣ ಕಾಲೇಜಿನ ಸಿಬ್ಬಂದಿ ವರ್ಗದವರ ವೇತನವನ್ನು ಜುಲೈ 2016 ರಿಂದ ತಡೆಹಿಡಿದಿರುವುದರಿಂದ ಶಿಕ್ಷಕರು ಸಂಕಷ್ಟಕ್ಕೆ ಸಿಲುಕಿರುವುದರಿಂದ ಕೂಡಲೇ ವೇತನ ಬಿಡುಗಡೆ ಮಾಡುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕಾರ್ಮಿಕ ಸಚಿವರು)**

## ೦೮. ಮಹದಾಯಿ ಹಾಗೂ ಕಳಸಾ ಬಂಡೂರಿ ಯೋಜನೆಗಳ ನೀರಿನ ಸಮಸ್ಯೆಗಳ ಬಗ್ಗೆ ಚರ್ಚೆ

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**